ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	: 761(770)
ಸದಸ್ಯರ ಹೆಸರು	: ಶ್ರೀಮತಿ.ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು)
ಉತ್ತರಿಸಬೇಕಾದ ದಿನಾಂಕ	: 20-12-2021
ಉತ್ತರಿಸುವ ಸಚಿವರು	: ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

ಕ್ರ. ಸಂ.	ಪ್ರಶ್ನೆ	ಉತ್ತರ
ಅ)	ರಾಜ್ಯದಲ್ಲಿ ಕೆಲವು ಖಾಸಗಿ ಸಂಸ್ಥೆಗಳು 2021-22ನೇ ಶೈಕ್ಷಣಿಕ ವರ್ಷಕ್ಕೆ ಸಂಬಂಧಿಸಿದಂತೆ, ಆನ್‌ಲೈನ್ ತರಗತಿಗಳನ್ನು ಸಂಪೂರ್ಣವಾಗಿ ನಿಲ್ಲಿಸಿ, ವಿದ್ಯಾರ್ಥಿಗಳನ್ನು ಆಫ್ ಲೈನ್ ತರಗತಿಗಳನ್ನೇ ತೆಗೆದುಕೊಳ್ಳಬೇಕೆಂದು ಕಡ್ಡಾಯ ಮಾಡಿರುವುದು ಸರ್ಕಾರ ಗಮನಕ್ಕೆ ಬಂದಿದೆಯೇ;	2021-22ನೇ ಶೈಕ್ಷಣಿಕ ವರ್ಷಕ್ಕೆ ಸಂಬಂಧಿಸಿದಂತೆ, ಆನ್‌ಲೈನ್ ತರಗತಿಗಳನ್ನು ಸಂಪೂರ್ಣವಾಗಿ ನಿಲ್ಲಿಸಿ, ವಿದ್ಯಾರ್ಥಿಗಳನ್ನು ಆಫ್‌ಲೈನ್ ತರಗತಿಗಳನ್ನೇ ತೆಗೆದುಕೊಳ್ಳಬೇಕೆಂದು ಕಡ್ಡಾಯಗೊಳಿಸಿರುವುದಿಲ್ಲ.
ಆ)	ಬಂದಿದ್ದಲ್ಲಿ ಕೆಲವು ಶಿಕ್ಷಣ ಸಂಸ್ಥೆಗಳ ಈ ರೀತಿಯ ಅವೈಜ್ಞಾನಿಕ ನಿರ್ಣಯದಿಂದ ಪಾಲಕರು ಅತಂಕಕ್ಕೊಳಗಾಗಿದ್ದು, ಕೋವಿಡ್ ಹಿನ್ನೆಲೆಯಲ್ಲಿ ಎಲ್ಲಾ ಖಾಸಗಿ ಶಿಕ್ಷಣ ಸಂಸ್ಥೆಗಳಲ್ಲಿ ಹೈಬ್ರಿಡ್ (ಅನ್ ಲೈನ್ ಮತ್ತು ಆಫ್ ಲೈನ್ ಎರಡೂ) ಮಾದರಿಯಲ್ಲಿ ತರಗತಿಗಳನ್ನು ನಡೆಬೇಕೆಂಬ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು;	ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ರವರ ಸುತ್ತೋಲೆ ಸಂಖ್ಯೆ:ಸಿ4(6)ಪ್ರೌ.ಶಿ/ಶಾ.ಕಾ.ಪ್ರ/48/ 2021-22, ದಿನಾಂಕ:04.10.2021 ರಲ್ಲಿ 6 ರಿಂದ 10ನೇ ತರಗತಿಯವರೆಗೆ ಪೂರ್ಣ ಪ್ರಮಾಣದಲ್ಲಿ ಭೌತಿಕವಾಗಿ ಶಾಲೆಗಳನ್ನು ಪ್ರಾರಂಭಿಸಲು ಅನುಮತಿಸಲಾಗಿದೆ. ಮುಂದುವರೆದು, ದಿನಾಂಕ: 21/10/2021ರಲ್ಲಿ 01 ರಿಂದ 05ನೇ ತರಗತಿ (ರಾಜ್ಯದಲ್ಲಿನ ಎಲ್ಲಾ ಸರ್ಕಾರಿ, ಅನುದಾನಿತ ಮತ್ತು ಅನುದಾನರಹಿತ) ಶಾಲೆಗಳನ್ನು ಹಂತ ಹಂತವಾಗಿ ಷರತ್ತುಗಳನ್ನು ವಿಧಿಸಿ ಭೌತಿಕವಾಗಿ ಆರಂಭಿಸಲು ಒಪ್ಪಿಗೆ ಸೂಚಿಸಿದೆ. ಶಾಲೆಗಳಿಗೆ ಹಾಜರಾಗುವಂತಹ ಮಕ್ಕಳ ಪೋಷಕರ ಒಪ್ಪಿಗೆ ಪತ್ರ ಕಡ್ಡಾಯಪಡಿಸಲಾಗಿದೆ.

ಇ)	ಕೋವಿಡ್ ಹಿನ್ನಲೆಯಲ್ಲಿ ಹೈಬ್ರಿಡ್ (ಅನ್ ಲೈನ್ ಮತ್ತು ಆಫ್ ಲೈನ್ ಎರಡೂ) ಮಾದರಿಯಲ್ಲಿ ತರಗತಿಗಳನ್ನು ನಡೆಸದಿರುವ ಖಾಸಗಿ ಶಿಕ್ಷಣ ಸಂಸ್ಥೆಗಳ ಮೇಲೆ ಸರ್ಕಾರ ಇದುವರೆಗೆ ಏನು ಕ್ರಮ ಕೈಗೊಂಡಿದೆ?	ಆನ್‌ಲೈನ್ ಮತು ಆಫ್ ಲೈನ್ ಎರಡೂ ತರಗತಿಗಳನ್ನು ನಡೆಸದಿರುವ ಖಾಸಗಿ ಶಿಕ್ಷಣ ಸಂಸ್ಥೆಗಳ ಬಗ್ಗೆ ಯಾವುದೇ ದೂರುಗಳು ಸ್ವೀಕೃತಿಯಾಗಿರುವುದಿಲ್ಲ.

ಇಪಿ 407 ಪಿಜಿಸಿ 2021

[ಬಿ.ಸಿ. ನಾಗೇಶ್]
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ
ಸಕಾಲ ಸಚಿವರು.